ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ

ಸಿ.ಸಿ. ನಂಬ್ರ: 2319/2017

ಚಾಸಾ: 7 ಪ್ರಾಸಾ: 4

ದಿನಾಂಕ: 18-12-2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಡಾ. ಉದಯ ಶಂಕರ |
| ತಂದೆಯ ಹೆಸರು | : | ಶೇಷಗಿರಿ ಹೆಬ್ಬಾರ್ |
| ವಯಸ್ಸು | : | 62 ವರ್ಷ |
| ಉದ್ಯೋಗ | : | ನಿವೃತ್ತ ವೈದ್ಯಾಧಿಕಾರಿ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ನಾನು 2002 ರಿಂದ ಇಲ್ಲಿಯವರೆಗೆ ಕುಂದಾಪುರದ ಸರಕಾರಿ ಆಸ್ಪತೆರಯಲ್ಲಿ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿ: 16-06-2017 ರಂದು ರಾತ್ರಿ 8-15 ಕ್ಕೆ ಚಾಸಾ-1ರವರು ಹಲ್ಲೆಯ ಹಿನ್ನೆಲೆಯಲ್ಲಿ ನಮ್ಮ ಆಸ್ಪತ್ರೆಗೆ ಬಂದಿದ್ದು, ಅವರನ್ನು ಪರೀಕ್ಷಿಸಲಾಗಿ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತದೆ.

1. ಎಡ ಕೆನ್ನೆಯ ಮೇಲೆ 1/2x1/2 ಸೆ.ಮೀ ಅಳತೆಯ ಉಬ್ಬಿದ ಗಾಯ

ಈ ಮೇಲೆ ಹೇಳಿದ ಗಾಯಗಳು ಸಾಮಾನ್ಯ ಸ್ವರೂಪದ್ದಾಗಿದ್ದು, ತಾಜಾ ಗಾಯವಾಗಿರುತ್ತದೆ. ಈ ಬಗ್ಗೆ ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ. ಸಾಕ್ಷಿ ಸದ್ರಿ ಗಾಯದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು, ಅದರಲ್ಲಿನ ಸಾಕ್ಷಿ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು: ಆರೋಪಿತರ ಪರ ವಕೀಲರಾದ ಶ್ರೀ  ಜೆ ಪಿ ಎಸ್    ರವರಿಂದ:</u>**

ಪ್ರತಿನಿತ್ಯ ಕೆಲಸ ಮಾಡುವಾಗ ಬಿದ್ದರೆ ಮೇಲಿನ ಗಾಯಗಳು ಆಗುವ ಸಾಧ್ಯತೆ ಇರುತ್ತದೆ. 1ನೇ ಆರೋಪಿಯಿಂದ ಹಲ್ಲೆ ಆಗಿರುವುದಾಗಿ ಗಾಯಾಳು ತಿಳಿಸಿರುತ್ತಾರೆ. ಚಾಸಾ-1 ರವರನ್ನು ಪರೀಕ್ಷಿಸದೆ ತನಿಖಾಧಿಕಾರಿಗಳ ಕೋರಿಕೆ ಮೇರೆಗೆ ಗಾಯದ ಪ್ರಮಾಣ ಪತ್ರವನ್ನು ವಿತರಿಸಿರುತ್ತೇನೆ ಎಂದರೆ ಸರಿಯಲ್ಲ.

<u>**ಮರು ವಿಚಾರಣೆ:** ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**